ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

4

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ    ದಿನಾಂಕ : DATE : 11-12-2022

## ಸಮಗ್ರ ಅಧ್ಯಯನ ನಡೆಸುವಂತೆ ಬೆಳೆಗಾರರ ಒಕ್ಕೂಟ ಮನವಿ

# ಕಸ್ತೂರಿರಂಗನ್ ವರದಿ ಜಾರಿಗೆ ತರಾತುರಿ ಬೇಡ

1/1/2/2…

**ವಿಶ್ವವಾಣಿ ಸುದ್ದಿಮನೆ** ಮಡಿಕೇರಿ

ಪಶ್ಚಿಮಘಟ್ಟ ಶ್ರೇಣಿಗಳ ಜನರಿಗೆ ಮಾರಕವಾಗಿ ಪರಿಣಮಿಸಲಿರುವ ಡಾ.ಕಸ್ತೂರಿರಂಗನ್ ವರದಿಯನ್ನು ಕರ್ನಾಟಕದಲ್ಲಿ ಅನುಷ್ಠಾನಗೊಳಿಸಲು ಯಾವುದೇ ತರಾತುರಿ ತೋರದೆ ವರದಿಯಿಂದಾಗುವ ಸಾಧಕ-ಬಾಧಕಗಳನ್ನು ಮತ್ತಷ್ಟು ಸಮಗ್ರವಾಗಿ ಪರಿಶೀಲಿಸುವಂತೆ ಕರ್ನಾಟಕ ಬೆಳೆಗಾರರ ಒಕ್ಕೂಟದ ನೇತೃತ್ವದ ನಿಯೋಗ ಮುಖ್ಯಮಂತ್ರಿ ಸೇರಿದಂತೆ ಸಚಿವರು, ಶಾಸಕರಿಗೆ ಮನವಿ ಮಾಡಿದೆ. ಈ ನಿಟ್ಟಿನಲ್ಲಿ ಸರಕಾರದಿಂದ ಸಕಾರಾತ್ಮಕ ಸ್ಪಂದನ ದೊರಕಿದೆ.



ಡಾ.ಕಸ್ತೂರಿರಂಗನ್ ವರದಿಯಿಂದಾಗುವ ಸಾಧಕ-ಬಾಧಕಗಳನ್ನು ಮತ್ತಷ್ಟು ಸಮಗ್ರವಾಗಿ ಪರಿಶೀಲಿಸುವಂತೆ ಕರ್ನಾಟಕ ಬೆಳೆಗಾರರ ಒಕ್ಕೂಟದ ನೇತೃತ್ವದ ನಿಯೋಗ ವಿಧಾನಸಭಾ ಸಭಾಪತಿಗಳಾದ ವಿಶ್ವೇಶ್ವರ ಹೆಗ್ಗಡೆ ಕಾಗೇರಿಗೆ ಮನವಿ ಮಾಡಿದರು.

ಕರ್ನಾಟಕ ಬೆಳೆಗಾರರ ಒಕ್ಕೂಟದ ನಿಯೋಗವು ಬೆಂಗಳೂರಿನ ವಿಧಾನಸೌಧದಲ್ಲಿ ಒಕ್ಕೂಟದ ಅಧ್ಯಕ್ಷ ಡಾ.ಎಚ್.ಟಿ ಮೋಹನ್ ಕುಮಾರ್ ನೇತೃತ್ವದಲ್ಲಿ ಶಾಸಕರಾದ ಅರಗ ಜ್ಞಾನೇಂದ್ರ ಹಾಗೂ ಮಾಜಿ ಶಾಸಕರಾದ ಎಚ್. ಎಂ.ವಿಶ್ವನಾಥ್ ಸಹಯೋಗದೊಂದಿಗೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ವಿಧಾನಸಭಾ ಸಭಾಪತಿಗಳಾದ ವಿಶ್ವೇಶ್ವರ ಹೆಗ್ಗಡೆ ಕಾಗೇರಿ, ಸಚಿವರುಗಳಾದ ಆರ್. ಅಶೋಕ ಮತ್ತು ಗೋಪಾಲಯ್ಯ, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಜಗದೀಶ್ ಶೆಟ್ಟರ್, ಶಾಸಕರುಗಳಾದ ಸಿ.ಟಿ ರವಿ, ಎಂ.ಪಿ. ಅಪ್ಪಚ್ಚುರಂಜನ್, ಎಚ್.ಕೆ.ಕುಮಾರಸ್ವಾಮಿ, ಟಿ. ಡಿ.ರಾಜೇಗೌಡ, ಕರ್ನಾಟಕ ಸರಕಾರದ ಮುಖ್ಯ ಕಾರ್ಯದರ್ಶಿ ಟಿ. ಎಂ ವಿಜಯ ಭಾಸ್ಕರ್ ಮತ್ತು ಹೆಚ್ಚುವರಿ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಬ್ರಿಜೇಶ್ ಕುಮಾರ್ ಅವರನ್ನು ಭೇಟಿ ಮಾಡಿತು.

ಕಸ್ತೂರಿರಂಗನ್ ವರದಿಯ ಬಗ್ಗೆ ಶಾಸಕ ಅರಗ ಜ್ಞಾನೇಂದ್ರ ಸದನದಲ್ಲಿ ಧ್ವನಿ ಎತ್ತಿದ್ದು, ರಾಜ್ಯದ ಗಮನ ಸೆಳೆದಿರುವುದು ಕರ್ನಾಟಕ ಬೆಳೆಗಾರರ ಒಕ್ಕೂಟದ ಹೋರಾಟಕ್ಕೆ ಸಕಾ ರಾತ್ಮಕ ಸ್ಪಂದನೆ ದೊರೆತಂತಾಗಿದೆ. ವಿರಾ ಜಪೇಟೆ ಶಾಸಕ ಕೆ.ಜಿ.ಬೋಪಯ್ಯ, ಕಾರ್ಕಳದ ಶಾಸಕ ಸುನೀಲ್ ಕುಮಾರ್ , ಮೂಡಿಗೆರೆ ಶಾಸಕ ಎಂ.ಪಿ. ಕುಮಾರಸ್ವಾಮಿಯವರು ಕೂಡ, ಕಸ್ತೂರಿರಂಗನ್ ವರದಿಯ ಮಾರ್ಪಾ ಡಿಗಾಗಿ ಸರಕಾರವನ್ನು ಒತ್ತಾಯಿಸಿದ್ದಾರೆ.

ಮುಖ್ಯಮಂತ್ರಿಗಳು ಹಾಗೂ ಸಚಿವರು ಕರ್ನಾಟಕ ಬೆಳೆಗಾರರ ಒಕ್ಕೂಟದ ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸಿದೆ. ಕಸ್ತೂರಿರಂಗನ್ ವರದಿ ಸಾಧಕ-ಭಾದಕಗಳನ್ನು ಪರಿಶೀಲಿಸಿ ವರದಿಯಲ್ಲಿ ಜನ ಸಾಮಾನ್ಯರಿಗೆ ಹಾಗೂ ಕೃಷಿಕರಿಗೆ ಯಾವುದೇ ತೊಂದರೆಯಾಗದಂತೆ ಮಾರ್ಪಾಡುಗೊಳಿಸಿ ಕೇರಳ ಸರಕಾರ ಹೊರ ತಂದ ವರದಿಯ ಪುರಸ್ಕೃತ ಪ್ರತಿಯನ್ನು ಮುಖ್ಯಮಂತ್ರಿಯವರಿಗೆ, ಸರಕಾರದ ಮುಖ್ಯ ಕಾರ್ಯದರ್ಶಿಗೆ ಸಲ್ಲಿಸಲಾಗಿದೆ ಎಂದು ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಕೆ.ಬಿ.ಕೃಷ್ಣಪ್ಪ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.